**All India Radio: Bangalore**
**Regional Bulletin In Kannada**
**01.04.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**01.04.2025 / 2.30 p.m.**
**<><><><>**

ಮುಖ್ಯಾಂಶಗಳು

1. ಶಿವಕುಮಾರ ಸ್ವಾಮೀಜಿಯವರ ೧೧೮ನೇ ಜಯಂತಿ : ಶಿಕ್ಷಣ ಕ್ಷೇತ್ರಕ್ಕೆ ಸಿದ್ಧಗಂಗಾ ಮಠದ ಕೊಡುಗೆ ಶ್ಲಾಘನೀಯ - ರಕ್ಷಣಾ ಸಚಿವ ರಾಜನಾಥ್ ಸಿಂಗ್
2. ಅಗತ್ಯ ವಸ್ತುಗಳ ಬೆಲೆ ಏರಿಕೆ ಹಿನ್ನೆಲೆ ; ಸರ್ಕಾರದ ವಿರುದ್ಧ ಕುಮಾರಸ್ವಾಮಿ ಅಸಮಾಧಾನ
3. ಭದ್ರ ಜಲಾಶಯದಿಂದ ತುಂಗಭದ್ರಾ ನದಿಗೆ ೮ ಸಾವಿರ ಕ್ಯೂಸೆಕ್ ನೀರು ; ನದಿಪಾತ್ರದ ಜನರಿಗೆ ಜಿಲ್ಲಾಡಳಿತ ಎಚ್ಚರಿಕೆ
4. ರಾಜ್ಯದ ಹಲವೆಡೆ ಮುಂದಿನ ಮೂರು ದಿನಗಳ ಕಾಲ ಗುಡುಗು, ಮಿಂಚು ಸಹಿತ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

<><><><>

ತುಮಕೂರಿನ ಸಿದ್ಧಗಂಗಾ ಮಠದ ತ್ರಿವಿಧ ದಾಸೋಹಿ ಶಿವೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ೧೧೮ನೇ ಜನ್ಮ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು ವಿವಿಧ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಇಂದು ಆಚರಿಸಲಾಯಿತು. ಶಿವಕುಮಾರ ಸ್ವಾಮೀಜಿಯವರ ಗದ್ದುಗೆಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪೂಜೆ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಇಂದು ಮಠದ ಈ ಸಮಾರಂಭದಲ್ಲಿ ಭಾಗವಹಿಸಲು ಸಂತಸವಾಗುತ್ತಿದೆ ಎಂದು ಹೇಳಿದರು. ಕರ್ನಾಟಕ ಆಧ್ಯಾತ್ಮ, ಸಂಗೀತ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಖ್ಯಾತಿ ಹೊಂದಿದ್ದು, ಬಸವಣ್ಣ, ಅಲ್ಲಮಪ್ರಭು, ಪುರಂದರದಾಸ, ಅಕ್ಕಮಹಾದೇವಿ ಅವರಂತಹ ಸಂತರು, ಕವಿಗಳನ್ನು ಒಳಗೊಂಡಂತೆ ಮಹನೀಯರ ಕ್ಷೇತ್ರವಾಗಿದೆ ಎಂದು ಬಣ್ಣಿಸಿದರು. ಇದೇ ವೇಳೆ ಶಿಕ್ಷಣ ಕ್ಷೇತ್ರಕ್ಕೆ ಸಿದ್ಧಗಂಗಾಮಠ ನೀಡುತ್ತಿರುವ ಕೊಡುಗೆಗಳನ್ನು ಅವರು ಸ್ಮರಿಸಿದರು.

**ಧ್ವನಿ : ರಾಜನಾಥ್ ಸಿಂಗ್ ( ೪೩ ಸೆಕೆಂಡ್‌ಗಳು)**

೧೧೮ನೇ ಜಯಂತ್ಯೋತ್ಸವದ ಅಂಗವಾಗಿ ೧೧೮ ಮಕ್ಕಳಿಗೆ "ಶಿ" ಅಕ್ಷರದಿಂದ ನಾಮಕರಣ ಮಾಡಲಾಯಿತು. ಸಮಾರಂಭದಲ್ಲಿ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸುತ್ತೂರು ಮಠದ ಶ್ರೀ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ, ಸಿದ್ಧಗಂಗಾ ಮಠದ ಉತ್ತರಾಧಿಕಾರಿ ಶಿವಸಿದ್ದೇಶ್ವರ ಸ್ವಾಮೀಜಿ, ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು. ತುಮಕೂರಿನ ಶಿವಕುಮಾರ ಸ್ವಾಮೀಜಿಯವರ ೧೧೮ ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲ ತಾಣದಲ್ಲಿ ಸ್ವಾಮೀಜಿಗೆ ಗೌರವ ಸಲ್ಲಿಸಿರುವ ಪ್ರಧಾನಿ ನರೇಂದ್ರ ಮೋದಿ ಸ್ವಾಮೀಜಿ ಸಮಾಜಕ್ಕೆ ಮಾರ್ಗದರ್ಶಕ ಬೆಳಕಾಗಿದ್ದು, ಸಮಾಜಕ್ಕೆ ದಾರಿ ತೋರಿಸಿದ್ದಾರೆ ಎಂದು ಹೇಳಿದ್ದಾರೆ. ಮಠಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಪೂಜ್ಯ ಸ್ವಾಮೀಜಿಯವರೊಂದಿಗಿನ ಕ್ಷಣಗಳನ್ನು ನೆನಪಿಸಿಕೊಂಡ ಪ್ರಧಾನಿ ೧.೧೭ ನಿಮಿಷಗಳ ವೀಡಿಯೊವನ್ನು ಹಂಚಿಕೊಂಡಿದ್ದಾರೆ.

<><><><>

ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸರ್ಕಾರ ಜನರ ಮೇಲೆ ಗದಾಪ್ರಹಾರ ಮಾಡುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಇಂದಿನಿಂದ ಸರ್ಕಾರ ಕಸದ ಮೇಲೆಯೂ ಸೆಸ್ ವಿಧಿಸುತ್ತಿದೆ ಎಂದು ಆರೋಪಿಸಿದ್ದಾರೆ. ನೀರು, ಮೆಟ್ರೋ ರೈಲು, ಬಸ್ ಟಿಕೆಟ್, ಹಾಲು, ವಿದ್ಯುತ್, ಮುದ್ರಾಂಕ, ಮಾರ್ಗದರ್ಶಿ ಮೌಲ್ಯ, ಅಬಕಾರಿ ಸುಂಕ, ಸರ್ಕಾರಿ ಆಸ್ಪತ್ರೆಗಳಲ್ಲಿ ಹೊರ ರೋಗಿಗಳ ಶುಲ್ಕ, ಶವದ

ಮರಣೋತ್ತರ ಪರೀಕ್ಷೆ ಶುಲ್ಕ ಸೇರಿದಂತೆ ದರಗಳ ಪಟ್ಟಿ ಏರುತ್ತಲೇ ಇದೆ ಎಂದು ಸರ್ಕಾರದ ವಿರುದ್ಧ ಬೇಸರ ವ್ಯಕ್ತಪಡಿಸಿದ್ದಾರೆ.

<><><>

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಎರಡು ಪ್ರಮುಖ ಹೋರಾಟಗಳನ್ನು ಕೈಗೆತ್ತಿಕೊಂಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಕಳೆದ ೧೦ ತಿಂಗಳಿನಲ್ಲಿ ಜನರಿಗೆ ಬೆಲೆ ಏರಿಕೆಯ ಗ್ಯಾರಂಟಿಯನ್ನು ನೀಡಿದೆ. ಕಾಂಗ್ರೆಸ್ ಸರ್ಕಾರ ಹಾಲಿನ ದರ, ವಿದ್ಯುತ್ ದರ, ನೀರಿನ ದರ, ಪೆಟ್ರೋಲ್, ಡೀಸೆಲ್, ಸ್ಟಾಂಪ್ ಶುಲ್ಕ, ಮೆಟ್ರೊ ದರ ಏರಿಸುವ ಮೂಲಕ ಜನಸಾಮಾನ್ಯರಿಗೆ ಬದುಕು ಹೊರೆ ಎನಿಸುವಂತೆ ಮಾಡಿದೆ ಎಂದು ದೂರಿದ್ದಾರೆ. ಬೆಲೆ ಏರಿಕೆ ಹಾಗೂ ರಾಜ್ಯ ಸರಕಾರದ ನೀತಿಗಳನ್ನು ಖಂಡಿಸಿ ನಾಳೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಅಹೋರಾತ್ರಿ ಧರಣಿ ನಡೆಸುವುದಾಗಿ ತಿಳಿಸಿದ್ದಾರೆ. ಎಸ್‌ಇಪಿ, ಟಿಎಸ್‌ಪಿ ಹಣ ದುರ್ಬಳಕೆ ವಿಚಾರ ಮುಂದಿಟ್ಟು ಮೈಸೂರಿನಿಂದ ಇದೇ ೭ರಿಂದ 'ಜನಾಕ್ರೋಶ ಯಾತ್ರೆ' ಹಮ್ಮಿಕೊಂಡಿದ್ದು, ಪ್ರತಿ ಜಿಲ್ಲೆಗೂ ಯಾತ್ರೆ ತೆರಳಲಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೋರಾಟಕ್ಕೆ ಚಾಲನೆ ನೀಡಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

<><><>

ಬಿಜೆಪಿ ಪಕ್ಷದಿಂದ ಉಚ್ಛಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಅವರೊಂದಿಗೆ ಗುರುತಿಸಿಕೊಂಡಿರುವ ಯಾವುದೇ ಶಾಸಕರು ಹೊಸ ಪಕ್ಷ ಕಟ್ಟುವ ನಿರ್ಧಾರ ಹೊಂದಿಲ್ಲ ಎಂದು ಗೋಕಾಕ್ ಕ್ಷೇತ್ರದ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಮಾಧ್ಯಮಗಳ ಸೃಷ್ಟಿ ಎಂದು ಹೇಳಿದ್ದಾರೆ. ಯತ್ನಾಳ್ ಅವರು ಪಕ್ಷಕ್ಕೆ ಮುಜುಗರ ತರುವ ಕೆಲ ಹೇಳಿಕೆಗಳನ್ನು ನೀಡಬಾರದಿತ್ತು. ಪಕ್ಷದ ವರಿಷ್ಠರೊಂದಿಗೆ ಚರ್ಚಿಸಿ ಯತ್ನಾಳ್ ಅವರನ್ನು ಮರಳಿ ಪಕ್ಷಕ್ಕೆ ಕರೆತರುವ ಪ್ರಯತ್ನ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಹಾವೇರಿ, ಗದಗ, ವಿಜಯನಗರ, ಕೊಪ್ಪಳ, ಬಳ್ಳಾರಿ ಜಿಲ್ಲೆಗಳ ಕುಡಿಯುವ ನೀರಿನ ಯೋಜನೆಗಳಿಗೆ ಹಾಗೂ ಬೆಳೆ ರಕ್ಷಣೆಗೆ ಲಕ್ಕವಳ್ಳಿಯ ಭದ್ರಾ ಜಲಾಶಯದಿಂದ ತುಂಗಭದ್ರಾ ನದಿಗೆ ಇಂದಿನಿಂದ ಮೂರು ದಿನಗಳವರೆಗೆ ನೀರು ಹರಿಸಲಾಗುತ್ತಿದೆ ಎಂದು ಹಾವೇರಿ ಜಿಲ್ಲಾಧಿಕಾರಿ ಡಾಕ್ಟರ್ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಪ್ರತಿ ದಿನ ೮ ಸಾವಿರ ಕ್ಯುಸೆಕ್‌ನಂತೆ ಭದ್ರಾ ಜಲಾಶಯದಿಂದ ನದಿಗೆ ನೀರು ಹರಿಸಲಾಗುತ್ತಿದೆ. ಹೀಗಾಗಿ ಸಾರ್ವಜನಿಕರು ನದಿಗೆ ಇಳಿಯಬಾರದು ಎಂದು ಸೂಚನೆ ನೀಡಿದ್ದಾರೆ. ಈ ಅವಧಿಯಲ್ಲಿ ವಿದ್ಯುತ್ ಹಾಗೂ ಡೀಸೆಲ್ ಪಂಪ್‌ಸೆಟ್ ಮತ್ತು ಟ್ಯಾಂಕರ್‌ಗಳ ಮೂಲಕ ಅನಧಿಕೃತವಾಗಿ ನದಿಯಿಂದ ನೀರು ಎತ್ತುವುದು ನಿಷೇಧಿಸಲಾಗಿದೆ. ನದಿ ಪಾತ್ರದಲ್ಲಿ ವಾಸವಿರುವವರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದ್ದಾರೆ.

<><><>

ಕೂಲಿ ಕಾರ್ಮಿಕರು ಜೀವನ ನಿರ್ವಹಣೆ ಮಾಡಲು ದೂರದ ನಗರಗಳಿಗೆ ವಲಸೆ ಹೋಗದೆ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡುವಂತೆ ಯಾದಗಿರಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಹಾದೇವ್ ಬಾಬಳಗಿ ಮನವಿ ಮಾಡಿದ್ದಾರೆ. ಇಂದಿನಿಂದ ದಿನಕ್ಕೆ ೩೭೦ ರೂಪಾಯಿ ಕೂಲಿ ದರ ಏರಿಕೆ ಮಾಡಲಾಗಿದ್ದು. ಗ್ರಾಮೀಣ ಪ್ರದೇಶದ ಅರ್ಹ ಕೂಲಿ ಕಾರ್ಮಿಕರು ನರೇಗಾ ಸೌಲಭ್ಯ ಪಡೆಯಲು ಅರ್ಹರಾಗಿದ್ದಾರೆ ಎಂದು ತಿಳಿಸಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಹಳ್ಳ, ಕೆರೆ, ನಾಲಾ, ಚೆಕ್ ಡ್ಯಾಮ್ ಹೂಳೆತ್ತುವುದು, ಕಂದಕ ಬದು ನಿರ್ಮಾಣ ಮಾಡುವ ಮೂಲಕ ನೈಸರ್ಗಿಕ ಜಲ ಸಂಪತ್ತು ರಕ್ಷಿಸಿ ಬಲಪಡಿಸಲು ಹಾಗೂ ಕಾರ್ಮಿಕರಿಗೆ ಆರ್ಥಿಕ ಭದ್ರತೆ ನೀಡುವ ಉದ್ದೇಶದಿಂದ ಹೆಚ್ಚು ಕೂಲಿ ಕೆಲಸ ಆಧಾರಿತ ಕಾಮಗಾರಿ ಆಯ್ದುಕೊಳ್ಳಲಾಗಿದೆ ಎಂದು ಎಂದು ಸ್ಪಷ್ಟಪಡಿಸಿದ್ದಾರೆ. ನರೇಗಾ ಯೋಜನೆಯಡಿ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೆ ಒಂದು ಆರ್ಥಿಕ ವರ್ಷದಲ್ಲಿ ನೂರು ದಿನಗಳ ಕೂಲಿ ಕೆಲಸದ ಖಾತ್ರಿ ನೀಡಿದೆ. ಒಂದು ಕುಟುಂಬ ನೂರು ದಿನ ಕೆಲಸ ಮಾಡಿದರೆ ೩೭ ಸಾವಿರ ರೂಪಾಯಿ ಪಡೆದುಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ಮಾಹಿತಿ ನೀಡಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಭದ್ರಾ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯಲ್ಲಿ ಕಾಡಾನೆ ದಾಳಿಯಿಂದ ಪ್ರಾಣ ಹನಿ ಹಾಗು ರೈತರ ಬೆಳೆ ನಾಶವಾಗುತ್ತಿದ್ದು, ತುರ್ತು ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ತರಿಕೆರೆ ಶಾಸಕ ಜಿ.ಹೆಚ್ ಶ್ರೀನಿವಾಸ್ ತಿಳಿಸಿದ್ದಾರೆ. ಕಾಡಾನೆ ದಾಳಿಯಿಂದ ಮೃತಪಟ್ಟ ರೈತ ವೆಂಕಟೇಶ್ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸರ್ಕಾರದ ವತಿಯಿಂದ ೧೫ ಲಕ್ಷ ಪರಿಹಾರದ ಚೆಕ್ ವಿತರಿಸಿ ಮಾತನಾಡಿದ ಅವರು ಕಾಡಿನಂಚಿನಲ್ಲಿ ಅತ್ಯಾಧುನಿಕ ಸೋಲಾರ್ ತಂತಿ ಬೇಲಿ ಅಳವಡಿಕೆಗೆ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

<><><><>

ಕರಾವಳಿ ಹಾಗೂ ಉತ್ತರ ಒಳನಾಡಿನ ಕೆಲವೆಡೆ ಇಂದು ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯದ ಕೆಲವೆಡೆ ಗುಡುಗು-ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಇದೇ  ೨, ೩ ಹಾಗೂ ೪ ರಂದು ಕರಾವಳಿ ಹಾಗೂ ಉತ್ತರ ಮತ್ತು ದಕ್ಷಿಣ ಒಳನಾಡಿನ ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ಬೆಂಗಳೂರು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ. ರಾಜ್ಯದ ಹಲವೆಡೆ ಗುಡುಗು-ಮಿಂಚು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರಕನ್ನಡ, ದಕ್ಷಿಣಕನ್ನಡ, ಉಡುಪಿ, ಬೆಳಗಾವಿ, ಧಾರವಾಡ, ಹಾವೇರಿ, ಗದಗ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಕೊಡಗು, ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ರಾಜ್ಯದಲ್ಲಿ ಇಂದಿನಿಂದ ಪ್ರತಿ ಲೀಟರ್ ಹಾಲು, ಮೊಸರಿನ ಬೆಲೆಯಲ್ಲಿ ೪ ರೂಪಾಯಿ ಏರಿಕೆಯಾಗಿದೆ. ವಿದ್ಯುತ್ ದರವು ಇಂದಿನಿಂದ ಏರಿಕೆಯಾಗಲಿದೆ.
2. ಗದಗ ಮೆಡಿಕಲ್ ಕಾಲೇಜಿಗೆ ಕೆ.ಎಚ್. ಪಾಟೀಲ್ ಹೆಸರಿಡಲು ಸರ್ಕಾರ ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಸಚಿವರು, ಶಾಸಕರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಭಿನಂದಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>